**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖಾ ಸಚಿವರ ಉತ್ತರ.**

******

ಪ್ರಶ್ನೆ:

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ "ಒಂದು ರಾಷ್ಟ್ರ ಒಂದು ಪಡಿತರ" ಜಾರಿಗೆ ತಂದಿದ್ದು, ಕೋವಿಡ್-19 ಲಾಕ್‌ಡೌನ್ ಸಂದರ್ಭದಲ್ಲಿ ಹೊರ ರಾಜ್ಯದ ಕಾರ್ಮಿಕರು ನಮ್ಮ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಪಡಿತರವನ್ನು ಪಡೆಯಲು ಅವರಿಗೆ ತೊಂದರೆಯಾಗಿದ್ದು, ಈ ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ರಾಜ್ಯದಲ್ಲಿನ ಸಾರ್ವಜನಿಕ ವಿತರಣಾ ಪದ್ಧತಿ ವ್ಯವಸ್ಥೆಯನ್ನು ಆನ್‌ಲೈನ್ ಮುಖಾಂತರ ನಿರ್ವಹಿಸಲಾಗುತ್ತಿದೆ. ಪಡಿತರ ಫಲಾನುಭವಿಗಳನ್ನು ಅವರ ಆಧಾರ್‌ನೊಂದಿಗೆ ಸಂಪೂರ್ಣವಾಗಿ ಜೋಡಣೆ ಮಾಡಲಾಗಿದ್ದು, ಕೇಂದ್ರದ "ಒಂದು ರಾಷ್ಟ್ರ ಒಂದು ಪಡಿತರ" ಯೋಜನೆಯನ್ನು ಈಗಾಗಲೇ ರಾಜ್ಯದಲ್ಲಿ ಜಾರಿಗೆ ತರಲಾಗಿದೆ. ರಾಜ್ಯದಲ್ಲಿನ ಪಡಿತರ ಫಲಾನುಭವಿಗಳು ರಾಜ್ಯದ ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಹಾಗೂ ಇತರೆ ರಾಜ್ಯಗಳಲ್ಲಿ ಅವರ ಪಡಿತರ ಹಂಚಿಕೆಯನ್ನು ಪಡೆದುಕೊಳ್ಳಲು ಅವಕಾಶ ಮಾಡಲಾಗಿದೆ. ಹಾಗೂ ಇತರೆ ರಾಜ್ಯದ ಪಡಿತರ ಫಲಾನುಭವಿಗಳು ರಾಜ್ಯದಲ್ಲಿನ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯುವ ವ್ಯವಸ್ಥೆ ಜಾರಿಗೊಳಿಸಲಾಗಿದೆ.

ಕೋವಿಡ್ -19 ಲಾಕ್ ಡೌನ್ ಸಂದರ್ಭದಲ್ಲಿ ರಾಜ್ಯದಲ್ಲಿ ವಾಸಿಸುತ್ತಿರುವ ಬೇರೆ ರಾಜ್ಯದ ಪಡಿತರ ಚೀಟಿಯನ್ನು ಹೊಂದಿರುವ ಕಾರ್ಮಿಕರು ರಾಜ್ಯದಲ್ಲಿನ ಯಾವುದೇ ನ್ಯಾಯಬೆಲೆ ಅಂಗಡಿಯಿಂದ ಪಡಿತರವನ್ನು ಪಡೆಯುವ ಅವಕಾಶ ಜಾರಿಯಲ್ಲಿದೆ. ಕೋವಿಡ್ ಸಂದರ್ಭದಲ್ಲಿ ಆತ್ಮ ನಿರ್ಭರ್ ಯೋಜನೆಯಡಿ ವಲಸೆ ಕಾರ್ಮಿಕರಿಗಾಗಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮೇ ಮತ್ತು ಜೂನ್ 2020 ತಿಂಗಳುಗಳಿಗೆ ಪ್ರತಿ ಫಲಾನುಭವಿಗೆ ತಲಾ 5 ಕೆ.ಜಿ ಅಕ್ಕಿ ಮತ್ತು 1 ಕೆ.ಜಿ ಕಡಲೇ ಕಾಳನ್ನು ಉಚಿತವಾಗಿ ಹಂಚಿಕೆ ಮಾಡಲಾಗಿತ್ತು. ಅದರಂತೆ, ರಾಜ್ಯದಲ್ಲಿ 40192 ಮೆ. ಟನ್ ಅಕ್ಕಿ ಮತ್ತು 2544 ಮೆ.ಟನ್ ಕಡಲೇಕಾಳನ್ನು ಹಂಚಿಕೆ ಮಾಡಲಾಗಿದೆ. ಈ ಸೌಲಭ್ಯವನ್ನು ರಾಜ್ಯದಲ್ಲಿನ 14.3 ಲಕ್ಷ ಫಲಾನುಭವಿಗಳಿಗೆ 11600.080 ಮೆ.ಟನ್ ಅಕ್ಕಿ ಮತ್ತು 2049.610 ಮೆ.ಟನ್ ಕಡಲೇ ಕಾಳನ್ನು ವಿತರಿಸಲಾಗಿದೆ. ಉಳಿಕೆ ದಾಸ್ತಾನನ್ನು ಕೇಂದ್ರ ಸರ್ಕಾರದ ನಿರ್ದೇಶನದಂತೆ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯ (ಪಿ.ಎಂ.ಜಿ.ಕೆ.ವೈ) ಹಂಚಿಕೆಗೆ ಸೇರ್ಪಡಿಸಿ ಪಡಿತರ ಫಲಾನುಭವಿಗಳಿಗೆ ವಿತರಿಸಲಾಗಿದೆ.

ಆನಾಸ 309 ಡಿಆರ್‌ಎ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.